ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ಮುಜರಾಯಿ ದೇವಾಲಯಗಳ ಖಾಯಂ ನೌಕರರಿಗೆ 6 ನೇ ವೇತನ ಆಯೋಗದ ಪರಿಷ್ಕೃತ ವೇತನ ಶ್ರೇಣಿ ನೀಡಿಕೆ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):-

203 (244) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಮುಜರಾಯಿ ದೇವಾಲಯಗಳಲ್ಲಿ ಸರ್ಕಾರಿ ವೇತನ ಶ್ರೇಣಿ ಪಡೆದು ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ಖಾಯಂ ನೌಕರರಿಗೆ 6 ನೇ ವೇತನ ಆಯೋಗದ ಪರಿಷ್ಕೃತ ವೇತನ ಶ್ರೇಣಿಯನ್ನು ಇದುವರೆವಿಗೂ ಮಂಜೂರು ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಇದುವರೆಗೆ ಮಂಜೂರು ಮಾಡುವಲ್ಲಿನ ವಿಳಂಬಕ್ಕೆ ಕಾರಣಗಳೇನು;

(ಇ) ಯಾವ ಕಾಲಮಿತಿಯಲ್ಲಿ ಮಂಜೂರು ಮಾಡಲಾಗುವುದು?